ಓ ಎಸ್ ನಂ.113/2023

ಪಿ.ಡಬ್ಲ್ಯು-4 ಚಂದ್ರಶಾ ತಂದೆ ಬಸವರಾಜ ಯರಗಲ್

**(ಇಂದು ದಿನಾಂಕಃ 14-08-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.)**

ಪಾಟೀ ಸವಾಲುಃ ಶ್ರೀ ಎಸ್ ಎಸ್ ಪಿ ವಕೀಲರಿಂದ.

ನನಗೆ ಚಂದ್ರು, ಚಂದ್ರಶೇಖರ ಮತ್ತು ಚಂದ್ರಶಾ ಎಂಬ ಹೆಸರುಗಳಿಂದ ಕರೆಯುತ್ತಾರೆ ಎಂದರೆ ಸರಿ. ನಾನು ಒಕ್ಕಲುತನ ಮಾಡುತ್ತೇನೆ. ನನ್ನನ್ನು ನ್ಯಾಯಾಲಯಕ್ಕೆ ಸಾಕ್ಷ್ಯ ನುಡಿಯಲು ೧ನೇ ಪ್ರತಿವಾದಿ ಕರೆದುಕೊಂಡು ಬಂದಿರುತ್ತಾರೆ. ನನ್ನ ಮುಖ್ಯ ವಿಚಾರಣೆಯ ವಿಷಯಗಳು ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಈ ದಾವೆಯನ್ನು ಯಾರು ಹಾಕಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿ ನುಡಿಯಲು ಬಾ ಎಂದು ಹೇಳಿದ ನಂತರ ನನಗೆ ಗೊತ್ತಾಗಿರುತ್ತದೆ, ಮೊದಲು ನನಗೆ ಏನು ಗೊತ್ತಿರುವುದಿಲ್ಲ. ನಾನು ಹೆಬ್ಬೆಟ್ಟಿನ ಸಹಿ ಹಾಕುತ್ತೇನೆ ಎಂದರೆ ಸರಿ. ಈ ಮೊದಲು ನಾನು ನ್ಯಾಯಾಲಯಕ್ಕೆ ಸಾಕ್ಷ್ಯ ನುಡಿಯಲು ಬಂದಿರುವುದಿಲ್ಲ. ನಾನು ಕಲಬುರಗಿಗೆ ಹೋಗಿ-ಬಂದು ಮಾಡುತ್ತೇನೆ. ನನಗೆ ಯಾವುದೇ ವಿಚಾರ ಗೊತ್ತಿರದೆ ಇದ್ದರೂ ನಾನು ೧ನೇ ಪ್ರತಿವಾದಿಯ ಮಾತುಕೇಳಿ ಒಂದು ಸುಳ್ಳು ಪ್ರಮಾಣ ಪತರ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ಧೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ : ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಅದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಅಫಜಲಪೂರ.